# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 174 /2022-23 ದಿನಾಂಕ : 8-2-2023

ದಿನಾಂಕ: 04-02-2023 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 (143) ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಹೇಮಂತ್ ಕುಮಾರ್.ಎಸ್ | ಸಹಾಯಕ ಅಭಿಯಂತರರು (ವಿ) ಬೆಂ.ವಿ.ಕಂ | 9449870535 |
| 10 | ಕೆ.ಕೆಂಪಯ್ಯ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ | 9844776655 |
| 11 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 12 | ಶ್ರೀ. ಕರ್ತಿಕ್.ಹೆಚ್.ಎಂ | Marshal (BBMP) | 8296046764 |
| 13 | ಶ್ರೀ.ಟಿ. ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | 9880052188 |

ದಿನಾಂಕ: 04-02-2023 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮು.ತಿ.ನೋ

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ರಾಜು ರವರು ಮಾತನಾಡಿ ಕೆಲವು ವಿಷಯಗಳನ್ನು ಸಭೆಯಲ್ಲಿ ಮಂಡಿಸಿ ಕ್ರಮ ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ

1. ಬಸವನಗುಡಿ ವ್ಯಾಪ್ತಿಯ ಸರ್ವೇಯರ್ ರಸ್ತೆ, ಕೃಷ್ಣ ರಸ್ತೆ, ಹೆಚ್.ಬಿ. ಸಮಾಜ ರಸ್ತೆ, ಎಂ.ಎಂ.ವಿ ರಸ್ತೆಗಳಿಗೆ ಡಾಂಬರು ಹಾಕುವುದು.
2. ಆರ್.ವಿ. ರಸ್ತೆಯ ಟೀಚರ್ಸ್ ಕಾಲೇಜ್ ಬಳಿ ಬಸ್ ಶೆಲ್ಟರ್ (Bus Stand) ಅನ್ನು ನಿರ್ಮಿಸುವುದು.
3. ಶ್ರೀ.ರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿ ನಿರ್ಮಿಸಿರುವ ಹಸು ಸಾಕಾಣಿಕೆ ಶೆಡ್ ಅನ್ನು ತೆರವುಗೊಳಿಸುವುದು.
4. ಸರ್ವೇಯರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ನಾನ್‌ವೆಜ್ ಹೋಟೆಲ್ ತೆರವುಗೊಳಿಸುವುದು.
5. ಬಸವನಗುಡಿ ವ್ಯಾಪ್ತಿಯ ಕೆಲವು ಕಡೆ ಕನ್ಸರ್‌ವೆನ್ಸಿಯನ್ನು ಖಾಸಗಿ ಜಾಗಗಳಾನ್ನಾಗಿ ಒತ್ತುವರಿ ಮಾಡಿರುವುದನ್ನು ತೆರವುಗೊಳಿಸುವುದು

ಸದರಿ ವಿಷಯಗಳನ್ನು ಸಭೆಯಲ್ಲಿ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಿ ಸಂಬಂಧಪಟ್ಟ ಆರೋಗ್ಯ ಇಲಾಖೆ, ಪಶುಸಂಗೋಪನಾ ಇಲಾಖೆ ಹಾಗೂ ಪೋಲಿಸ್ ಇಲಾಖೆಯ ಅಧಿಕಾರಿಗಳೊಂದಿಗೆ ಸಂಪರ್ಕಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಬಸವನಗುಡಿಯ ಆರ್.ಜೆ.ಪ್ರಸಾದ್ ರವರು ಮಾತನಾಡುತ್ತಾ ಎಂ.ಎನ್. ಕೃಷ್ಣರಾವ್ ರಸ್ತೆಯಲ್ಲಿನ ಮಾಧವರಾವ್ ಸರ್ಕಲ್ ಬಳಿ ಹಣ್ಣಿನ ವ್ಯಾಪಾರಿಗಳು ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಡಿಕೊಂಡು ಗಾಡಿಗಳನ್ನು ನಿಲ್ಲಿಸಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ತಪ್ಪಿಸುವುದು, ನ್ಯಾಷನಲ್ ಕಾಲೇಜ್ ಸಿಗ್ನಲ್ ಬಳಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುತ್ತಿರುವುದನ್ನು ತಡೆಯುವುದು, ನ್ಯಾಷನಲ್ ಕಾಲೇಜ್ ಸಿಗ್ನಲ್ ಬಳಿ ಆಹಾರದ ಗಾಡಿಗಳನ್ನು ಪಾರ್ಕಿಂಗ್ ಮಾಡುತ್ತುರುವುದನ್ನು ತೆರವುಗೊಳಿಸುವುದು ಹಾಗೂ ಕನಕಪುರ ರಸ್ತೆಯಲ್ಲಿ ಸಾರ್ವಜನಿಕ ಶೌಚಾಲಯವನ್ನು ನಿರ್ಮಿಸುವಂತೆ ಕೋರಿ ಸಭೆಯ ಗಮನಕ್ಕೆ ತಂದರು, ಸದರಿ ವಿಷಯಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ಸಹಾಯಕ ಅಭಿಯಂತರರು ಹಾಗೂ ಹಿರಿಯ, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ನಂತರ ಮಾವಳ್ಳಿಯ ಶ್ರೀ.ಗೋವಿಂದ್‌ಸಿಂಗ್ ರಜಪೂರ್ ಮತ್ತು ಶ್ರೀ.ಮಂಜು ಲೋಗಿ ರವರು ಜಂಟಿಯಾಗಿ ಮಾತನಾಡಿ ಸುಶೀಲಾ ರಸ್ತೆ ಹಾಗೂ ಮಾವಳ್ಳಿಯ ರಸ್ತೆಗಳಲ್ಲಿ ಮ್ಯಾನ್‌ಹೋಲ್‌ಗಳು ಕೆಲವು ಕಡೆ ರಸ್ತೆಗಿಂತ ಕಳಗೆ ಹಾಗೂ ಮೇಲೆ ಇರುವುದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಹಾಗೂ ಸೊಳ್ಳೆಗಳು ಉತ್ಪತ್ತಿಯಾಗುತ್ತಿರುವುದಾಗಿ ಸಭೆಗೆ ಗಮನಕ್ಕೆ ತಂದರು, ಮಾನ್ಯ ನೋಡಲ್ ಅಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಿದರು. ಮತ್ತೆ ಮಾತು ಮುಂದುವರೆಸಿದ ಇವರುಗಳು ಆರ್.ವಿ. ರಸ್ತೆಯ ಕಾಮತ್ ಹೋಟೆಲ್ ಪಕ್ಕದಲ್ಲಿ ಸಿಗರೇಟ್ ಅಂಗಡಿ ಇಟ್ಟು ಮಾರಾಟ ಮಾಡುತ್ತಿರುವುದನ್ನು ತೆರವುಗೊಳಿಸುವಂತೆ ಮತ್ತು ಇದೇ ರಸ್ತೆಯಲ್ಲಿರುವ ಗಾಲಾಶಾಪ್ ಬಳಿ ಪಾದಾಚಾರಿ ಮಾರ್ಗದಲ್ಲಿ ಕಾರುಗಳನ್ನು ನಿಲ್ಲಿಸುತ್ತಿರುವುದರಿಂದ

ಪು.ತಿ.ನೋ

ತೊಂದರೆಯುಂಟಾಗುತ್ತಿದ್ದು ಸದರಿ ಸ್ಥಳದಲ್ಲಿ ಬೊಲ್ಯಾರ್ಡ್ಸ್‌ಗಳನ್ನು ಅಳವಡಿಸಬೇಕೆಂದು ಕೋರಿದರು. ಸದರಿ ವಿಷಯಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ವಿ.ವಿ.ಪುರಂನ ಶ್ರೀ.ವಿ.ಎಸ್.ಎಸ್.ಮೂರ್ತಿರವರು ಮಾತನಾಡಿ Food Street ನಲ್ಲಿ ಶೌಚಾಲಯ ನಿರ್ಮಿಸುವಂತೆ ಕೋರಿದರು. ಸದರಿ ರಸ್ತೆಯಲ್ಲಿ ಯೋಜನಾ ವಿಭಾಗದಿಂದ ಕಾಮಗಾರಿ ನಡೆಯುತ್ತಿದ್ದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವುದಾಗಿ ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -174 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 174 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)